## ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹಗರಿಬೊಮ್ಮನಹಳ್ಳಿ

ಸಿ ಸಿ ನಂ. 790/2017

ಸಾಕ್ಷಿಗೆ ದಿನಾಂಕ 07-08-2025 ರಂದು ಪ್ರಮಾಣ ವಚನ ಭೋದಿಸಲಾಯಿತು.

C.W.: 8 P.W.: 5

| | | |
|---|---|---|
| ಹೆಸರು | : | ಅಗಸರ ಬಸಣ್ಣ |
| ತಂದೆಯ ಹೆಸರು | : | ಯಮುನಪ್ಪ |
| ವಯಸ್ಸು | : | 50 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ಬನ್ನಿಕಲ್ಲು ಗ್ರಾಮ |

ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ನನಗೆ ಆರೋಪಿತನ ಪರಿಚಯ ಇದೆ. ಚಾಸಾ1 ರಿಂದ 7 ಮತ್ತು 9 ರಿಂದ 13 ರವರು ನಮ್ಮ ಊರಿನವರು. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ, ನಾನು ಯಾವುದೇ ಗಲಾಟೆ ನೋಡಿಲ್ಲ ಮತ್ತು ನಾನು ಪೋಲೀಸರ ಮುಂದೆ ಯಾವುದೇ ಹೇಳಿ ನೀಡಿಲ್ಲ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-

ಚಾಸಾ-7 ರವರ ಮಗಳಾದ ಚಾಸಾ-1 ರವರ ಮತ್ತು ಆರೋಪಿತನ ವಿವಾಹವು ದಿಃ19-04-2005 ರಂದು ಮೋರಿಗೇರಿ ಗ್ರಾಮದ ಮಹಾದೇವ ತಾತನ ಮಠದಲ್ಲಿ ಗುರುಹಿರಿಯರ ಸಮ್ಮುಖದಲ್ಲಿ ನೆರವೇರಿದ್ದು ಆಗ ನಾನು ಮತ್ತು ಚಾಸಾ-4, 9, 10, 12, 13 ರವರು ಸಹಾ ಸದರಿ ಮದುವೆಯಲ್ಲಿ ಪಾಲ್ಗೊಂಡಿದ್ದು ಇರುತ್ತದೆಂದರೆ ಸರಿಯಲ್ಲ. ಮದುವೆಯಾದ ಸ್ವಲ್ಪ ದಿನದ ನಂತರ ಆರೋಪಿಯು ಮಧ್ಯಪಾನ ಮಾಡುವುದು, ಜೂಜಾಟವಾಡುವುದು ಮಾಡುತ್ತಾ ಚಾಸಾ-1 ರವರ ಜೊತೆ ಜಗಳ ಮಾಡಿ ಅವಾಚ್ಯ ಶಬ್ದಗಳಿಂದ ಬೈಯುತ್ತಾ ಅವಳ ಶೀಲದ ಬಗ್ಗೆ ಶಂಕಿಸಿ ಮಾನಸಿಕ ಮತ್ತು ದೈಹಿಕ ಹಿಂಸೆಯನ್ನು ನೀಡಿ ಅವಳಿಗೆ ಪ್ರಾಣಬೆದರಿಕೆ ಹಾಕಿರುತ್ತಾನೆಂದರೆ ಸರಿಯಲ್ಲ. ಸದರಿ ವಿಚಾರದ ಕುರಿತು ಚಾಸಾ-1 ರವರು ಮಾನ್ಯ ಇದೇ ನ್ಯಾಯಾಲಯದಲ್ಲಿ ಖಾಸಗೀ ದೂರು ಕೊಟ್ಟಿರುತ್ತಾರೆ ಆ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುವ ವಿಚಾರ ನನಗೆ ತಿಳಿಯಿತು ಎಂದರೆ ಸರಿಯಲ್ಲ. ಘಟನೆಯ ಕುರಿತು ನಾನು ದಿಃ 24-12-2016 ರಂದು ಪೋಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆಂದರೆ ಸರಿಯಲ್ಲ. ಸದರಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-12

ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯವಾಗಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ- ಇಲ್ಲ</u>

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ